ಅ) ಜಲ ಸಂಪನ್ಮೂಲ ಇಲಾಖೆಯಡಿಯಲ್ಲಿ ಬರುವ ಯಾವ ಯಾವ ನಿಗಮಗಳು ತಮ್ಮ ಲೆಕ್ಕ ಪರಿಶೋಧನೆ ಮತ್ತು ವಾರ್ಷಿಕ ವರದಿಗಳನ್ನು ಪ್ರಸಕ್ತ ಸಾಲಿನವರೆವಿಗೂ ಸಲ್ಲಿಸಿರುವುದಿಲ್ಲ; (ನಿಗಮವಾರು ವಿವರಗಳನ್ನು ಒದಗಿಸುವುದು);

ಆ) ಹಾಗಿದ್ದಲ್ಲಿ, ಯಾವ ಯಾವ ಸಾಲಿನ ವರದಿಗಳು ಬಾಕಿ ಇವೆ;

ಇ) ಸಕಾಲಕ್ಕೆ ಸರಿಯಾಗಿ ವರದಿಗಳನ್ನು ಸಲ್ಲಿಸದೇ ಇರುವವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಹಾಗೂ ಸಾರಿಗೆ ಸಚಿವರು)

ಅ) ಜಲ ಸಂಪನ್ಮೂಲ ಇಲಾಖೆಯಡಿ ಮೂರು ನಿಗಮಗಳು ಬರುತ್ತವೆ.

1. ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ
2. ಕರ್ನಾಟಕ ನೀರಾವರಿ ನಿಗಮ ನಿಯಮಿತ
3. ಕಾವೇರಿ ನೀರಾವರಿ ನಿಗಮ ನಿಯಮಿತ ಕೃಷ್ಣಾ ಭಾಗ್ಯ ಜಲ ನಿಗಮ ಮತ್ತು ಕರ್ನಾಟಕ ನೀರಾವರಿ ನಿಗಮಗಳು ಪ್ರಸಕ್ತ ಸಾಲಿನವರೆಗೂ ತಮ್ಮ ತಮ್ಮ ಲೆಕ್ಕಪರಿಶೋಧನೆ ಮತ್ತು ವಾರ್ಷಿಕ ವರದಿಗಳನ್ನು ಸಲ್ಲಿಸಿರುತ್ತಾರೆ.

ಕಾವೇರಿ ನೀರಾವರಿ ನಿಗಮ ನಿಯಮಿತವು 2003ರಲ್ಲಿ ಆಸ್ತಿತ್ವಕ್ಕೆ ಬಂದಿದ್ದೆ ಆದ್ದರಿಂದ ತನ್ನ ಪ್ರಥಮ ವರ್ಷದ ಲೆಕ್ಕ ಪರಿಶೋಧನೆ ಮತ್ತು ವಾರ್ಷಿಕ ವರದಿ ಸಲ್ಲಿಕೆ ಬಾಕಿ ಇದೆ. ಅದರಂತೆ ವರದಿ ತಯಾರಿಕೆ ಕಾರ್ಯವು ಪ್ರಗತಿಯಲ್ಲಿದೆ. ಇಂತಹ ವರದಿಗಳ ಸಲ್ಲಿಕೆಗೆ ಕಂಪನಿಗಳ ಕಾಯ್ದೆಯಡಿ ಪ್ರತೀ ವರ್ಷದ ಡಿಸೆಂಬರ್ 31ರವರೆಗೆ ಕಾಲಾವಕಾಶವಿದೆ. ಅದರಂತೆ ಕ್ರಮ ಕೈಗೊಳ್ಳಲಾಗುವುದು.

ಆ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಸಕಾಲಕ್ಕೆ ವರದಿ ಸಲ್ಲಿಸಲಾಗುತ್ತಿರುವುದರಿಂದ ನಿಗಮಗಳ ವಿರುದ್ಧ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

578(774) : ಶ್ರೀ ಎನ್ ರಾಜಣ್ಣ (ಬೆಳ್ಳಾವಿ) ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುಮಕೂರು ಜಿಲ್ಲಾ ವ್ಯಾಪ್ತಿಯಲ್ಲಿರುವ ಬಸ್ ಡಿಪೋಗಳ ಹಾಗೂ ಬಸ್‌ಗಳ ಸಂಖ್ಯೆ ಎಷ್ಟು; (ಡಿಪೋವಾರು ವಿವರ ನೀಡುವುದು);

ಆ) ಕಳೆದ 3 ವರ್ಷಗಳಲ್ಲಿ ಈ ಡಿಪೋಗಳಿಂದ ತಲಾವಾರು ಬಂದಿರುವ ಆದಾಯ ಎಷ್ಟು;

ಇ) ಗ್ರಾಮಾಂತರ ಪ್ರದೇಶಗಳಲ್ಲಿ ಸರಿಯಾದ ಬಸ್ ಸೌಕರ್ಯ ಒದಗಿಸುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

ಈ) ನಕಲಿ ಪಾಸ್‌ಗಳನ್ನು ವಿತರಣೆ ಮಾಡಿ ವಂಚಿಸಿರುವ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಿ ಕ್ರಮ ತೆಗೆದುಕೊಳ್ಳಲಾಗಿದೆ; (ವಿವರಗಳನ್ನು ನೀಡುವುದು)?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) 4.

	ಡಿಪೋ	ಬಸ್‌ಗಳ ಸಂಖ್ಯೆ
1.	ತುಮಕೂರು	110
2.	ಕುಣಿಗಲ್	81
3.	ತುರುವೇಕೆರೆ	76
4.	ಶಿರಾ	30
	ಒಟ್ಟು	**297**

ಆ) ಕಳೆದ 3 ವರ್ಷಗಳಲ್ಲಿ ಡಿಪೋವಾರು ಗಳಿಸಿದ ಆದಾಯದ ವಿವರ ಈ ಕೆಳಗೆ ನೀಡಲಾಗಿದೆ:

ಕ್ರ. ಸಂ.	ಡಿಪೋ	01–02	02–03	03–04
1.	ತುಮಕೂರು	1701.17	1775.85	1757.62
2.	ಕುಣಿಗಲ್	1153.25	1233.24	1258.44
3.	ತುರುವೇಕೆರೆ	816.42	878.80	961.46
4.	ಶಿರಾ	–	81.08	381.53
	ಒಟ್ಟು	**3670.84**	**3968.97**	**4359.05**

ಇ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ತುಮಕೂರು ಜಿಲ್ಲೆಯ ರಾಷ್ಟ್ರೀಕೃತವಾದ ವಲಯದಲ್ಲಿರುವ ಎಲ್ಲಾ 391 ಗ್ರಾಮಗಳಿಗೆ ಸಾಕಷ್ಟು ಪ್ರಮಾಣದಲ್ಲಿ ಸಾರಿಗೆ ಸೌಲಭ್ಯವನ್ನು ಕಲ್ಪಿಸಿದೆ.

ಈ) 9 ಪ್ರಕರಣಗಳನ್ನು ಪತ್ತೆ ಹಚ್ಚಿ ಕ್ರಮ ತೆಗೆದುಕೊಳ್ಳಲಾಗಿದೆ.

579(777) : ಶ್ರೀ ಕ್ಯಾತ್‌ಸಂದ್ರ ಎನ್. ರಾಜಣ್ಣ (ಬೆಳ್ಳಾವಿ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯ ಬೆಳ್ಳಾವಿ ಕ್ಷೇತ್ರ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಗೆ ಸೇರಿದ ರಸ್ತೆಗಳ ಉದ್ದ ಎಷ್ಟು? (ಕಿಮೀ.ಗಳಲ್ಲಿ) ಈ ರಸ್ತೆಗಳ ಅಭಿವೃದ್ಧಿಗಾಗಿ ಕಳೆದ 3 ವರ್ಷಗಳಲ್ಲಿ ಸರ್ಕಾರ ನಿಗದಿ ಮಾಡಿದ್ದ ಹಣ ಎಷ್ಟು ಅದರಲ್ಲಿ ಖರ್ಚು ಮಾಡಿರುವ ಹಣ ಎಷ್ಟು (ವರ್ಷವಾರು ವಿವರಗಳನ್ನು ಒದಗಿಸುವುದು);

ಆ) ತುಮಕೂರು ಜಿಲ್ಲಾ ವ್ಯಾಪ್ತಿಯಲ್ಲಿರುವ ಒಟ್ಟು ಸೇತುವೆಗಳ ಸಂಖ್ಯೆ ಎಷ್ಟು? ಅವು ಯಾವುವು?

ಇ) ಶಿಥಿಲಾವಸ್ಥೆಯಲ್ಲಿರುವ ಸೇತುವೆಗಳು ಯಾವುವು? ಇವುಗಳಲ್ಲಿ ಪುನರ್‌ನಿರ್ಮಾಣವಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? ಇದಕ್ಕಾಗಿ ಕಳೆದ 3 ವರ್ಷಗಳಲ್ಲಿ ಮೀಸಲಿಟ್ಟಿದ್ದ ಹಣ ಮತ್ತು ಖರ್ಚು ಮಾಡಿರುವ ಹಣ ಎಷ್ಟು;